## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 677 |
| ಸದಸ್ಯರ ಹೆಸರು | : | ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 21-02-2023 |
| ಉತ್ತರಿಸುವ ಸಚಿವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಅಂಗನವಾಡಿ ಕಾರ್ಯಕರ್ತೆಯರ ಸಂಖ್ಯೆ ಮತ್ತು ಅವರಿಗೆ ನೀಡುತ್ತಿರುವ ಗೌರವಧನ ಸವಲತ್ತುಗಳೇನು; (ವಿವರ ನೀಡುವುದು) | ರಾಜ್ಯದಲ್ಲಿ ಒಟ್ಟು 66361 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. 64729 ಅಂಗನವಾಡಿ ಕಾರ್ಯಕರ್ತೆಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ.<br><br>ಪ್ರಸ್ತುತ ಅಂಗನವಾಡಿ ಕಾರ್ಯಕರ್ತೆ, ಮಿನಿ ಅಂಗನವಾಡಿ ಕಾರ್ಯಕರ್ತೆ ಮತ್ತು ಅಂಗನವಾಡಿ ಸಹಾಯಕಿಯರಿಗೆ ನೀಡಲಾಗುತ್ತಿರುವ ಮಾಸಿಕ ಗೌರವಧನ ಈ ಕೆಳಕಂಡಂತಿರುತ್ತದೆ:- |

| ವಿವರ | ವಿಂಗಡನೆ | ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಗೌರವಧನ | ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ ನೀಡುತ್ತಿರುವ ಗೌರವಧನ | ಒಟ್ಟು |
|---|---|---|---|---|
| ಅಂಗನವಾಡಿ ಕಾರ್ಯಕರ್ತೆ | 10 ವರ್ಷಕ್ಕಿಂತ ಕಡಿಮೆ ವರ್ಷ ಸೇವೆ ಸಲ್ಲಿಸಿದವರಿಗೆ | 4500 | 6500 | 11000 |
| | 10 ರಿಂದ 20 ವರ್ಷ ಸೇವೆ ಸಲ್ಲಿಸಿದವರಿಗೆ | | 6750 | 11250 |
| | 20 ಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದವರಿಗೆ | | 7000 | 11500 |
| ಅಂಗನವಾಡಿ ಸಹಾಯಕಿ | 10 ವರ್ಷಕ್ಕಿಂತ ಕಡಿಮೆ ವರ್ಷ ಸೇವೆ ಸಲ್ಲಿಸಿದವರಿಗೆ | 2500 | 3750 | 6250 |
| | 10 ರಿಂದ 20 ವರ್ಷ ಸೇವೆ ಸಲ್ಲಿಸಿದವರಿಗೆ | | 4000 | 6500 |
| | 20 ಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದವರಿಗೆ | | 4250 | 6750 |
| ಮಿನಿ ಅಂಗನವಾಡಿ ಕಾರ್ಯಕರ್ತೆ | 10 ವರ್ಷಕ್ಕಿಂತ ಕಡಿಮೆ ವರ್ಷ ಸೇವೆ ಸಲ್ಲಿಸಿದವರಿಗೆ | 3500 | 3750 | 7250 |
| | 10 ರಿಂದ 20 ವರ್ಷ ಸೇವೆ ಸಲ್ಲಿಸಿದವರಿಗೆ | | 4000 | 7500 |
| | 20 ಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದವರಿಗೆ | | 4250 | 7750 |

**ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರಿಗೆ ಗೌರವಧನದೊಂದಿಗೆ ಕೆಳಗಿನ ಸೌಲಭ್ಯಗಳನ್ನು ಸಹ ನೀಡಲಾಗುತ್ತಿದೆ.**

- ಗುರುತರವಾದ ಕಾಯಿಲೆಗಳಿಂದ ಬಳಲುತ್ತಿದ್ದಲ್ಲಿ ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರಿಗೆ ವೈದ್ಯಕೀಯ ವೆಚ್ಚ ಮರುಪಾವತಿ ಯೋಜನೆಯಡಿ ಗರಿಷ್ಠ ರೂ.50,000/- ಗಳನ್ನು ಪಾವತಿಸಲಾಗುತ್ತಿದೆ.

| | | |
|---|---|---|
| | | • ಮಾಸಿಕ ಸಭೆಗಳಿಗೆ ಹಾಜರಾಗಲು ಟಿ.ಎ. ಮತ್ತು ಡಿ.ಎ. ಸೌಲಭ್ಯ ನೀಡಲಾಗುವುದು.<br>• ಪ್ರಧಾನ ಮಂತ್ರಿ ಮಾತೃ ವಂದನಾ ಯೋಜನೆಯಡಿ ಸೌಲಭ್ಯ ಪಡೆಯುವ ಫಲಾನುಭವಿಗಳ ಅರ್ಜಿಯನ್ನು ಆನ್‌ಲೈನ್‌ನಲ್ಲಿ ಅಳವಡಿಸಿದಾಗ ಒಂದು ಅರ್ಜಿಗೆ ರೂ.50/- ನ್ನು ಹಾಗೂ 3 ಅರ್ಜಿಗಳನ್ನು ಅಳವಡಿಸಿದ ನಂತರ ಪ್ರತ್ಯೇಕವಾಗಿ ರೂ.50/- ಗಳು ಸೇರಿದಂತೆ ಅಂಗನವಾಡಿ ಕಾರ್ಯಕರ್ತೆಗೆ ರೂ.200/- ಗಳು ಮತ್ತು ಅದೇ ರೀತಿ ಅಂಗನವಾಡಿ ಸಹಾಯಕರಿಗೆ ಫಲಾನುಭವಿಗಳ ಅರ್ಜಿಯನ್ನು ಆನ್‌ಲೈನ್‌ನಲ್ಲಿ ಅಳವಡಿಸಿದಾಗ ಒಂದು ಅರ್ಜಿಗೆ ರೂ25/-ನ್ನು ಹಾಗೂ 3 ಅರ್ಜಿಗಳನ್ನು ಅಳವಡಿಸಿದ ನಂತರ ಪ್ರತ್ಯೇಕವಾಗಿ ರೂ.25/- ಗಳು ಸೇರಿದಂತೆ ಒಟ್ಟು ರೂ.100/- ರಂತೆ ಪ್ರೋತ್ಸಾಹಧನ ನೀಡಲಾಗುವುದು.<br>• ಎನ್.ಪಿ.ಎಸ್. ಲೈಟ್ ಯೋಜನೆಯಡಿ ನೋಂದಾಯಿತರಾದ ಅಂಗನವಾಡಿ ಕಾರ್ಯಕರ್ತೆಯರಿಗೆ ಮಾಸಿಕ ರೂ.150/- ಹಾಗೂ ಸಹಾಯಕಿಯರಿಗೆ ರೂ.84/- ಗಳೊಂದಿಗೆ, ಸರ್ಕಾರದ ವಂತಿಗೆಯನ್ನೂ ಸೇರಿಸಿ ನಿವೃತ್ತಿ ನಂತರದಲ್ಲಿ ನೀಡಲಾಗುತ್ತದೆ.<br>• ಎನ್.ಪಿ.ಎಸ್. ಲೈಟ್ ಯೋಜನೆಯಿಂದ ವಂಚಿತರಾಗಿ ನಿವೃತ್ತಿ ಹೊಂದಿದ ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರಿಗೆ ಅನುಕ್ರಮವಾಗಿ ರೂ.50,000/- ಮತ್ತು ರೂ.30,000/- ಗಳನ್ನು ಇಡಿಗಂಟು ಯೋಜನೆಯಡಿ ಪಾವತಿಸಲಾಗುತ್ತಿದೆ.<br>• ಸೇವೆಯಲ್ಲಿರುವಾಗಲೇ ಮೃತಪಟ್ಟ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಕುಟುಂಬದ ಅವಲಂಬಿತರಿಗೆ ರೂ.50,000/- ಗಳನ್ನು ನೀಡಲಾಗುತ್ತಿದೆ.<br>• ವಾರ್ಷಿಕ 15 ದಿನಗಳ ಬೇಸಿಗೆ ರಜೆಯನ್ನು ನೀಡಲಾಗುತ್ತಿದೆ. |
| ಆ) | ಗೌರವಧನ ಹೆಚ್ಚಳ ಸೇರಿದಂತೆ ಅಂಗನವಾಡಿ ಕಾರ್ಯಕರ್ತೆಯರ ವೇತನ ಇತರೆ ಬೇಡಿಕೆಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇವರ ಬೇಡಿಕೆ ಈಡೇರಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ; | ಹೌದು.<br>ಸರ್ಕಾರದ ಆದೇಶ ದಿನಾಂಕ: 04.02.2023 ರಲ್ಲಿ 2023-24ನೇ ಸಾಲಿನಿಂದ ಉಪಧನ (Gratuity) ಪಾವತಿಸಲು ಮಂಜೂರಾತಿ ನೀಡಲಾಗಿದೆ. ಅಂಗನವಾಡಿ ಕೇಂದ್ರಗಳ ವೇಳಾಪಟ್ಟಿಯನ್ನು ಬದಲಾಯಿಸಿ ಸುತ್ತೋಲೆ ಹೊರಡಿಸಲಾಗಿದೆ. ಯೋಜನೇತರ ಕೆಲಸಗಳಿಗೆ ನಿಯೋಜಿಸದಂತೆ ಪತ್ರ ಬರೆಯಲಾಗಿದೆ. ಸೇವಾ ನಿಯಮ ರಚಿಸಲು ಕ್ರಮ ವಹಿಸಲಾಗುತ್ತಿದೆ. SSLC ಪಾಸಾದ ಸಹಾಯಕಿಯರು / ಮಿನಿ ಅಂಗನವಾಡಿ ಕಾರ್ಯಕರ್ತೆಯರಿಗೆ ಮುಂಬಡ್ತಿ ನೀಡಲು ತಿದ್ದುಪಡಿ ಆದೇಶ ಹೊರಡಿಸಲಾಗಿದೆ. ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯರ ಸೇವೆಯು ಗೌರವ ಧನದ ಸೇವೆಯಾಗಿರುವುದರಿಂದ, ಕನಿಷ್ಟ ವೇತನ ಮತ್ತು ಇ.ಎಸ್.ಐ. ಸೌಲಭ್ಯಕ್ಕೆ ಅವಕಾಶವಿರುವುದಿಲ್ಲ. |
| ಇ) | ಅಂಗನವಾಡಿ ಕಾರ್ಯಕರ್ತೆಯರ ಸಮಸ್ಯೆಗಳಿಗೆ ಸಮಗ್ರ ಸುಧಾರಣೆ ಜಾರಿಗೆ ತರುವ ನಿಟ್ಟಿನಲ್ಲಿ ಸರ್ಕಾರಕ್ಕೆ ವರದಿ ಸಲ್ಲಿಸಲು ಸಮಿತಿಯನ್ನು ರಚಿಸಬಹುದಲ್ಲವೆ? | ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರ ಸಂಘಟನೆಗಳೊಂದಿಗೆ ಆಗಿಂದಾಗ್ಗೆ ಸಭೆ ನಡೆಸಿ ಸಮಸ್ಯೆಗಳನ್ನು ಪರಿಗಹರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |

**ಸಂಖ್ಯೆ:ಮಮಇ 38 ಐಸಿಡಿ 2023**

Halappa BA

**(ಆಚಾರ್ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ
ಹಿರಿಯ ನಾಗರೀಕರ ಸಬಲೀಕರಣ ಸಚಿವರು.